**All India Radio: Bangalore**
**National Bulletin In Kannada**
**18.04.2026 19.35 hrs**

ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು

ಮುಖ್ಯಾಂಶಗಳು

**೧. ಹನ್ನೆರಡು ಸಾವಿರದ ೯೮೦ ಕೋಟಿ ರೂಪಾಯಿಗಳ ಆರ್ಥಿಕ ಖಾತರಿಯೊಂದಿಗೆ ಭಾರತ ಕಡಲ ವಿಮಾ ನಿಧಿ ರಚನೆಗೆ ಕೇಂದ್ರ ಸಂಪುಟ ಸಭೆ ಅನುಮೋದನೆ**

**೨. ಕರ್ನಾಟಕದ ತೊಗರಿ, ಆಂಧ್ರ ಪ್ರದೇಶದ ಕಡಲೆ, ಉತ್ತರ ಪ್ರದೇಶದ ಆಲೂಗಡ್ಡೆ ಖರೀದಿ ಅವಧಿ ವಿಸ್ತರಿಸಲು ಕೇಂದ್ರ ಸರ್ಕಾರ ಸಮ್ಮತಿ**

**೩. ಅಮೆರಿಕದ ದಿಗ್ಬಂಧನಕ್ಕೆ ಪ್ರತಿಕ್ರಿಯೆಯಾಗಿ ಹಾರ್ಮುಜ್ ಜಲಸಂಧಿಯನ್ನು ಮತ್ತೊಮ್ಮೆ ಮುಚ್ಚಲು ಇರಾನ್ ನಿರ್ಧಾರ**

**೪. ಐಪಿಎಲ್ ಟಿ-೨೦ ಕ್ರಿಕೆಟ್: ರಾಯಲ್ ಚಾಲೆಂಜರ್ಸ್ ಬೆಂಗಳೂರು ವಿರುದ್ಧ ಡೆಲ್ಲಿ ಕ್ಯಾಪಿಟಲ್ಸ್ ತಂಡಕ್ಕೆ ಜಯ**

**<>><><*><><<>**

ಕೇಂದ್ರ ಸಂಪುಟ ಸಭೆ ಇಂದು ೧೨ ಸಾವಿರದ ೯೮೦ ಕೋಟಿ ರೂಪಾಯಿಗಳ ಆರ್ಥಿಕ ಖಾತರಿಯೊಂದಿಗೆ ಭಾರತ ಕಡಲ ವಿಮಾ ನಿಧಿ ಎಂಬ ದೇಶೀಯ ವಿಮಾ ನಿಧಿಯನ್ನು ರಚಿಸಲು ಅನುಮೋದನೆ ನೀಡಿದೆ. ಈ ಕುರಿತು ನವದೆಹಲಿಯಲ್ಲಿಂದು ಮಾಹಿತಿ ನೀಡಿದ ಕೇಂದ್ರ ವಾರ್ತಾ ಮತ್ತು ಪ್ರಸಾರ ಖಾತೆ ಸಚಿವ ಅಶ್ವಿನಿ ವೈಷ್ಣವ್, ಯಾವುದೇ ಅಂತಾರಾಷ್ಟ್ರೀಯ ಮೂಲದಿಂದ ಭಾರತೀಯ ಬಂದರುಗಳಿಗೆ ಸರಕುಗಳನ್ನು ಸಾಗಿಸುವ ಹಡಗುಗಳಿಗೆ ಮತ್ತು ಭಾರತೀಯ ಬಂದರುಗಳಿಂದ ವಿದೇಶಗಳಿಗೆ ಸರಕುಗಳನ್ನು ಸಾಗಿಸುವ ಹಡಗುಗಳಿಗೆ ಇದು ಕೈಗೆಟಕುವ ವಿಮೆಯನ್ನು ಖಚಿತಪಡಿಸುತ್ತದೆ ಎಂದು ತಿಳಿಸಿದರು. ಇದೇ ವೇಳೆ, ಈ ವರ್ಷದ ಜನವರಿ ೧ ರಿಂದ ಪೂರ್ವಾನ್ವಯವಾಗುವಂತೆ ಕೇಂದ್ರ ಸರ್ಕಾರಿ ನೌಕರರಿಗೆ ಹೆಚ್ಚುವರಿ ತುಟ್ಟಿ ಭತ್ಯೆ-ಡಿಎ ಮತ್ತು ಪಿಂಚಣಿದಾರರಿಗೆ ತುಟ್ಟಿ ಪರಿಹಾರ- ಡಿಆರ್ ಅನ್ನು ಬಿಡುಗಡೆ ಮಾಡಲು ಕೇಂದ್ರ ಸಚಿವ ಸಂಪುಟ ಅನುಮೋದನೆ ನೀಡಿದೆ ಎಂದು ಹೇಳಿದರು. ಈ ಮೂಲಕ ಡಿಎ ಮತ್ತು ಡಿಆರ್ ಶೇಕಡಾ ೨ ರಷ್ಟು ಹೆಚ್ಚಳವಾಗಲಿದೆ. ಬೆಲೆ ಏರಿಕೆಯನ್ನು ಸರಿದೂಗಿಸಲು ಮೂಲ ವೇತನ ಅಥವಾ ಪಿಂಚಣಿಯ ಪ್ರಸ್ತುತ ಅಸ್ತಿತ್ವದಲ್ಲಿರುವ ಶೇಕಡಾ ೫೮ ರಿಂದ ಶೇಕಡಾ ೬೦ ಏರಿಕೆಯಾಗಲಿದೆ. ಇದರಿಂದ ಕೇಂದ್ರದ ಮೇಲೆ ಪ್ರತಿ ವರ್ಷ ೬ ಸಾವಿರದ ೭೯೧ ಕೋಟಿ ರೂಪಾಯಿ ಆರ್ಥಿಕ ಹೊರೆಯಾಗಲಿದೆ ಎಂದು ಸಚಿವ ಅಶ್ವಿನಿ ವೈಷ್ಣವ್ ಮಾಹಿತಿ ನೀಡಿದರು. 'ಪ್ರಧಾನಮಂತ್ರಿ ಗ್ರಾಮ ಸಡಕ್ ಯೋಜನೆ'ಯನ್ನು ೨೦೨೫ರ ಮಾರ್ಚ್‌ನಿಂದ ೨೦೨೮ರ ಮಾರ್ಚ್‌ವರೆಗೆ ಮುಂದುವರಿಸಲು ಸಚಿವ ಸಂಪುಟ ಅನುಮೋದನೆ ನೀಡಿದೆ. ಗ್ರಾಮೀಣ ಕೃಷಿ ಮಾರುಕಟ್ಟೆಗಳು, ಶಾಲೆಗಳು, ಆಸ್ಪತ್ರೆಗಳು ಮತ್ತು ವಸತಿ ಪ್ರದೇಶಗಳನ್ನು ಸಂಪರ್ಕಿಸುವ ಮಾರ್ಗಗಳನ್ನು ಡಾಂಬರೀಕರಣಗೊಳಿಸುವುದು ಈ ಯೋಜನೆಯ ಉದ್ದೇಶವಾಗಿದೆ. ಈ ಯೋಜನೆಯ ಪರಿಷ್ಕೃತ ವೆಚ್ಚ ೮೩ ಸಾವಿರದ ೯೭೭ ಕೋಟಿ ರೂಪಾಯಿಗಳಾಗಿರುತ್ತದೆ ಎಂದು ಸಚಿವರು ತಿಳಿಸಿದರು. ಇದೇ ವೇಳೆ, ಆರ್ಥಿಕ ವ್ಯವಹಾರಗಳ ಸಂಪುಟ ಸಮಿತಿಯು ಇಂದು ಒಟ್ಟು ೨೪ ಸಾವಿರದ ೮೧೫ ಕೋಟಿ ರೂಪಾಯಿಗಳ ವೆಚ್ಚದ ೨ ರೈಲ್ವೆ ಯೋಜನೆಗಳನ್ನು ಅನುಮೋದಿಸಿದೆ. ಈ ಯೋಜನೆಗಳು ಉತ್ತರ ಪ್ರದೇಶದ ಘಾಸಿಯಾಬಾದ್-ಸೀತಾಪುರ ಮೂರನೇ ಮತ್ತು ನಾಲ್ಕನೇ ಪಥ ಹಾಗೂ ಆಂಧ್ರ ಪದೇಶದ ರಾಜಮಂಡ್ರಿ- ವಿಶಾಖಪಟ್ಟಣ ಮೂರನೇ ಮತ್ತು ನಾಲ್ಕನೇ ಮಾರ್ಗಗಳಾಗಿವೆ. ಈ ಯೋಜನೆಗಳು ಉತ್ತರ ಪ್ರದೇಶ ಮತ್ತು ಆಂಧ್ರ ಪದೇಶದಾದ್ಯಂತ ೧೫ ಜಿಲ್ಲೆಗಳನ್ನು ಒಳಗೊಂಡಿವೆ ಎಂದು ಸಚಿವ ಅಶ್ವಿನಿವೈಷ್ಣವ್ ಮಾಹಿತಿ ನೀಡಿದರು.

**<>><><*><><<>**

ಕೇಂದ್ರ ಸರ್ಕಾರಿ ನೌಕರರಿಗೆ ಶೇಕಡಾ ೨ ರಷ್ಟು ತುಟ್ಟಿ ಭತ್ಯೆ ಮತ್ತು ಪಿಂಚಣಿದಾರರಿಗೆ ತುಟ್ಟಿ ಭತ್ಯೆ ಪರಿಹಾರ ಹೆಚ್ಚಿಸುವ ಸರ್ಕಾರದ ನಿರ್ಧಾರವನ್ನು ಕೇಂದ್ರ ಗೃಹ ಸಚಿವ ಅಮಿತ್ ಶಾ ಶ್ಲಾಘಿಸಿದ್ದಾರೆ. ಈ ಕುರಿತು ಸಾಮಾಜಿಕ ಜಾಲತಾಣದಲ್ಲಿ ಸಚಿವರು, ಈ ವರ್ಷದ ಜನವರಿ ೧ ರಿಂದ ಪೂರ್ವಾನ್ವಯವಾಗುವ ಈ ಹೆಚ್ಚಳವು ನೌಕರರು ಮತ್ತು ಅವರ ಕುಟುಂಬಗಳ ಆರ್ಥಿಕ ಭದ್ರತೆಗೆ ಸರ್ಕಾರದ ಬದ್ಧತೆಯನ್ನು ಸಂಕೇತಿಸುತ್ತದೆ ಎಂದು ಹೇಳಿದ್ದಾರೆ. ೮೩ ಸಾವಿರದ ೯೭೭ ಕೋಟಿ ರೂಪಾಯಿಗಳ ವೆಚ್ಚದಲ್ಲಿ ಪ್ರಧಾನ ಮಂತ್ರಿ ಗ್ರಾಮ ಸಡಕ್ ಯೋಜನೆಯನ್ನು ಮುಂದುವರಿಸಲು ಕೇಂದ್ರ ಸಚಿವ ಸಂಪುಟ ಅನುಮೋದನೆ ನೀಡಿದೆ. ಗ್ರಾಮೀಣ ಕೃಷಿ ಮಾರುಕಟ್ಟೆಗಳು, ಶಾಲೆಗಳು ಮತ್ತು ಆಸ್ಪತ್ರೆಗಳನ್ನು ಸುಧಾರಿತ ಸಂಪರ್ಕದೊಂದಿಗೆ ಸಂಪರ್ಕಿಸಲು ಈ ಉಪಕ್ರಮವು ಆದ್ಯತೆ ನೀಡುತ್ತದೆ ಎಂದರು.

**<>><><*><><<>**

ಪ್ರಧಾನಿ ನರೇಂದ್ರ ಮೋದಿ ಅವರು ಇಂದು ರಾತ್ರಿ ೮.೩೦ ಕ್ಕೆ ರಾಷ್ಟ್ರವನ್ನುದ್ದೇಶಿಸಿ ಮಾತನಾಡಲಿದ್ದಾರೆ. ಮಹಿಳಾ ಮೀಸಲಾತಿಗೆ ಸಂಬಂಧಿಸಿದ ಸಂವಿಧಾನ ತಿದ್ದುಪಡಿ ಮಸೂದೆಯು ಲೋಕಸಭೆಯಲ್ಲಿ ಮೂರನೇ ಎರಡರಷ್ಟು ಬಹುಮತ ಪಡೆಯುವಲ್ಲಿ ವಿಫಲವಾದ ಒಂದು ದಿನದ ನಂತರ ಈ ಬೆಳವಣಿಗೆ ನಡೆದಿದೆ. ವಿರೋಧ ಪಕ್ಷಗಳು ಈ ಮಸೂದೆಯನ್ನು ಬೆಂಬಲಿಸದ ಕಾರಣ ಮಸೂದೆ ಅಂಗೀಕಾರ ವಿಫಲವಾಯಿತು. ಕ್ಷೇತ್ರ ಪುನರ್ ವಿಂಗಡಣೆಯ ಮೂಲಕ ಮಹಿಳಾ ಮೀಸಲಾತಿ ಅನುಷ್ಠಾನಕ್ಕೆ ಪ್ರಸ್ತಾವಿತ ಮಸೂದೆಯು ದೀರ್ಘ ಚರ್ಚೆಯ ನಂತರ ವಿಫಲವಾಯಿತು.

**<>><><*><><<>**

ರೈತರಿಗೆ ಅನುಕೂಲವಾಗುವ ನಿಟ್ಟಿನಲ್ಲಿ ಕರ್ನಾಟಕದಲ್ಲಿ ತೊಗರಿ ಖರೀದಿ, ಆಂಧ್ರಪ್ರದೇಶದಲ್ಲಿ ಕಡಲೆ ಖರೀದಿ ಹಾಗೂ ಉತ್ತರಪ್ರದೇಶದಲ್ಲಿ ಆಲೂಗಡ್ಡೆ ಖರೀದಿ ಅವಧಿ ವಿಸ್ತರಿಸಲು ಕೇಂದ್ರ ಸರ್ಕಾರ ಅನುಮೋದನೆ ನೀಡಿದೆ. ಈ ಕುರಿತು ಮಾಹಿತಿ ನೀಡಿದ ಕೇಂದ್ರ ಕೃಷಿ ಮತ್ತು ರೈತ ಕಲ್ಯಾಣ ಸಚಿವ ಶಿವರಾಜ್ ಸಿಂಗ್ ಚೌಹಾಣ್, ರೈತರು ಕಷ್ಟಪಟ್ಟು ಬೆಳೆದ ಉತ್ಪನ್ನಗಳಿಗೆ ನ್ಯಾಯಯುತ ಮತ್ತು ಲಾಭದಾಯಕ ಬೆಲೆಗಳನ್ನು ಪಡೆಯುವುದನ್ನು ಈ ಖರೀದಿಗಳು ಖಚಿತಪಡಿಸುತ್ತವೆ ಎಂದು ಹೇಳಿದ್ದಾರೆ. ಅಸ್ಥಿರ ಮಾರುಕಟ್ಟೆಗಳಲ್ಲಿ ಸಂಕಷ್ಟದ ಸಮಯದಲ್ಲಿ ಇದು ಉತ್ಪಾದಕರನ್ನು ರಕ್ಷಿಸುತ್ತವೆ. ಕೃಷಿ ಮಾರುಕಟ್ಟೆಯಲ್ಲಿ ಒಟ್ಟಾರೆ ಸ್ಥಿರತೆಗೆ ಕೊಡುಗೆ ನೀಡುತ್ತವೆ. ಕೃಷಿ ಮತ್ತು ವ್ಯಾಪಾರಕ್ಕಾಗಿ ಹೆಚ್ಚು ಸುರಕ್ಷಿತ ವಾತಾವರಣವನ್ನು ನಿರ್ಮಿಸುತ್ತವೆ ಎಂದು ಅವರು ವಿವರಿಸದರು. ಪ್ರಧಾನಿ ನರೇಂದ್ರ ಮೋದಿ ಅವರ ನೇತೃತ್ವದಲ್ಲಿ ದೇಶಾದ್ಯಂತ ಪ್ರತಿಯೊಬ್ಬ ರೈತರ ಹಿತಾಸಕ್ತಿಗಳನ್ನು ರಕ್ಷಿಸಲು ಸರ್ಕಾರ ಬದ್ಧವಾಗಿದೆ ಎಂದು ಸಚಿವ ಶಿವರಾಜ್ ಸಿಂಗ್ ಚೌಹಾಣ್ ಪುನರುಚ್ಚರಿಸಿದ್ದಾರೆ.

**<>><><*><><<>**

ಇರಾನಿನ ಹಡಗು ಸಾಗಣೆ ಮತ್ತು ಬಂದರುಗಳ ಮೇಲಿನ ಅಮೆರಿಕದ ದಿಗ್ಬಂಧನಕ್ಕೆ ಪ್ರತಿಕ್ರಿಯೆಯಾಗಿ ಹಾರ್ಮುಜ್ ಜಲಸಂಧಿಯನ್ನು ಮತ್ತೊಮ್ಮೆ ಮುಚ್ಚಲಾಗಿದೆ ಎಂದು ಇರಾನ್ ಘೋಷಿಸಿದೆ. ಇರಾನಿನ ಬಂದರುಗಳ ಮೇಲಿನ ಅಮೆರಿಕದ ದಿಗ್ಬಂಧನ ಜಾರಿಯಲ್ಲಿರುವವರೆಗೆ ಜಲಸಂಧಿಯ ಮೂಲಕ ಸಾಗಣೆಯನ್ನು ನಿರ್ಬಂಧಿಸುವುದನ್ನು ಅದು ಮುಂದುವರಿಸುತ್ತದೆ ಎಂದು ಇರಾನ್ ಎಚ್ಚರಿಸಿದೆ. ಮತ್ತೊಂದೆಡೆ, ಅಮೆರಿಕದ ಪಡೆಗಳು ಇರಾನಿನ ಬಂದರುಗಳ ಮೇಲೆ ನೌಕಾ ದಿಗ್ಬಂಧನವನ್ನು ಜಾರಿಗೊಳಿಸಿವೆ. ಪ್ರತ್ಯೇಕ ಬೆಳವಣಿಗೆಯಲ್ಲಿ, ಇರಾನ್‌ನ ಪಡೆಗಳು, ಹಾರ್ಮುಜ್ ಜಲಸಂಧಿಯ ಮೂಲಕ ಹಾದುಹೋಗುವ ಟ್ಯಾಂಕರ್ ಒಂದರ ಮೇಲೆ ಗುಂಡು ಹಾರಿಸಿವೆ. ಆದರೆ, ಹಡಗು ಮತ್ತು ಅದರ ಸಿಬ್ಬಂದಿ ಸುರಕ್ಷಿತವಾಗಿದ್ದಾರೆ ಎಂದು ಬ್ರಿಟಿಷ್ ಮಿಲಿಟರಿ ವರದಿ ಮಾಡಿದೆ.

**<>><><*><><<>**

ಪಶ್ಚಿಮ ಬಂಗಾಳದಾದ್ಯಂತ ಮೊದಲ ಹಂತದ ವಿಧಾನಸಭಾ ಚುನಾವಣೆಯ ಪ್ರಚಾರ ತೀವ್ರಗೊಂಡಿದೆ. ಬಿಜೆಪಿ ಹಿರಿಯ ನಾಯಕರು ರಾಜ್ಯದ ವಿವಿಧ ಭಾಗಗಳಲ್ಲಿ ರ್‍ಯಾಲಿಗಳನ್ನುದ್ದೇಶಿಸಿ ಮಾತನಾಡಿದರು. ಪ್ರತಿಪಕ್ಷ ನಾಯಕ

ಸುವೇಂದು ಅಧಿಕಾರಿ, ಪುರ್ಬಾ ಮೇದಿನಿಪುರ ಜಿಲ್ಲೆಯ ನಂದಿಗ್ರಾಮದಲ್ಲಿ ರ್‍ಯಾಲಿ ನಡೆಸಿದರು. ಬಿಜೆಪಿ ನಾಯಕ ದಿಲೀಪ್ ಘೋಷ್ ಖರಗ್‌ಪುರದಲ್ಲಿ ನಡೆದ ಸಭೆಯನ್ನು ಉದ್ದೇಶಿಸಿ ಮಾತನಾಡಿದರು. ಉತ್ತರ ಪ್ರದೇಶ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್ ಮತ್ತು ಅಸ್ಸಾಂ ಮುಖ್ಯಮಂತ್ರಿ ಹಿಮಂತ ಬಿಸ್ವಾ ಶರ್ಮಾ ಸೇರಿದಂತೆ ಪಕ್ಷದ ನಾಯಕರು ಉತ್ತರ ಬಂಗಾಳದಲ್ಲಿ ಪಕ್ಷದ ಅಭ್ಯರ್ಥಿಗಳ ಪರ ಪ್ರಚಾರ ನಡೆಸಿದರು. ಮಧ್ಯಪ್ರದೇಶದ ಮುಖ್ಯಮಂತ್ರಿ ಮೋಹನ್ ಯಾದವ್, ಉತ್ತರ ೨೪ ಪರಗಣ ಜಿಲ್ಲೆಯ ಕಾಮರ್‌ಹಟಿಯಲ್ಲಿ ನಡೆದ ರ್‍ಯಾಲಿಯಲ್ಲಿ ಪಕ್ಷದ ಅಭ್ಯರ್ಥಿ ಪರ ಮತಯಾಚಿಸಿದರು. ಮತ್ತೊಂದೆಡೆ, ಪಶ್ಚಿಮ ಬಂಗಾಳ ಮುಖ್ಯಮಂತ್ರಿ ಮಮತಾ ಬ್ಯಾನರ್ಜಿ ಮಾತನಾಡಿ, ವಿಧಾನಸಭಾ ಚುನಾವಣೆಯಲ್ಲಿ ಬಿಜೆಪಿ ಸೋಲನ್ನು ಎದುರಿಸಲಿದೆ ಎಂದು ಹೇಳಿದ್ದಾರೆ. ಟಿಎಂಸಿ ನಾಯಕ ಅಭಿಷೇಕ್ ಬ್ಯಾನರ್ಜಿ, ಮುರ್ಷಿದಾಬಾದ್‌ನ ಫರಕ್ಕಾದಲ್ಲಿ ರೋಡ್ ಶೋ ನಡೆಸಿದರು. ಕಾಂಗ್ರೆಸ್ ನಾಯಕ ಮತ್ತು ತೆಲಂಗಾಣ ಸಚಿವ ಮೊಹಮ್ಮದ್ ಅಜರುದ್ದೀನ್, ಮುರ್ಷಿದಾಬಾದ್ ಮತ್ತು ಮಾಲ್ಡಾ ಜಿಲ್ಲೆಗಳಲ್ಲಿ ಸಾರ್ವಜನಿಕ ಸಭೆಗಳನ್ನುದ್ದೇಶಿಸಿ ಮಾತನಾಡಿದರು.

**<>><><*><><<>**

ಉಕ್ರೇನ್‌ನಾದ್ಯಂತ ರಾತ್ರಿಯಿಡೀ ನಡೆದ ರಷ್ಯಾ ದಾಳಿಗಳಲ್ಲಿ ಒಬ್ಬ ನಾಗರಿಕ ಸಾವನ್ನಪ್ಪಿದ್ದು, ೧೨ಕ್ಕೂ ಹೆಚ್ಚು ಜನರು ಗಾಯಗೊಂಡಿದ್ದಾರೆ. ಒಡೆಸಾದಲ್ಲಿನ ಬಂದರು ಮೂಲಸೌಕರ್ಯವನ್ನು ಗುರಿಯಾಗಿಸಿಕೊಂಡು ನಡೆಸಿದ ದಾಳಿ ಸೇರಿದಂತೆ ಉಕ್ರೇನ್‌ನ ಉತ್ತರ ಮತ್ತು ಪೂರ್ವ ಭಾಗಗಳಲ್ಲಿ ನಡೆದ ದಾಳಿಗಳಲ್ಲಿ ಕನಿಷ್ಠ ೨೬ ಜನರು ಗಾಯಗೊಂಡಿದ್ದಾರೆ. ರಷ್ಯಾ ರಾತ್ರಿಯಿಡೀ ೨೧೯ ಡ್ರೋನ್‌ಗಳನ್ನು ಹಾರಿಸಿದ್ದು, ಅವುಗಳಲ್ಲಿ ೧೯೦ ಅನ್ನು ತಡೆಹಿಡಿಯಲಾಗಿದೆ ಎಂದು ಉಕ್ರೇನ್ ವಾಯುಪಡೆ ತಿಳಿಸಿದೆ. ಏತನ್ಮಧ್ಯೆ, ರಷ್ಯಾದ ನಗರಗಳಾದ ನೊವೊಕುಯಿಬಿಶೆವ್ಸ್ಕ ಮತ್ತು ಸಿಜ್ರಾನ್‌ನಲ್ಲಿ ಕೈಗಾರಿಕಾ ಪ್ರದೇಶಗಳನ್ನು ಗುರಿಯಾಗಿಸಿಕೊಂಡು, ಉಕ್ರೇನ್ ಡ್ರೋನ್ ದಾಳಿಗಳನ್ನು ನಡೆಸಿದೆ. ಈ ನಗರಗಳು ಪ್ರಮುಖ ತೈಲ ಸಂಸ್ಕರಣಾಗಾರಗಳಿಗೆ ನೆಲೆಯಾಗಿವೆ.

**<>><><*><><<>**

ಬೆಂಗಳೂರಿನ ಎಂ.ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿಂದು ನಡೆದ ಐಪಿಎಲ್ ಟಿ-೨೦ ಕ್ರಿಕೆಟ್ ಪಂದ್ಯಾವಳಿಯ ದಿನ ಮೊದಲ ಪಂದ್ಯದಲ್ಲಿ ರಾಯಲ್ ಚಾಲೆಂಜರ್ಸ್ ಬೆಂಗಳೂರು ವಿರುದ್ಧ ಡೆಲ್ಲಿ ಕ್ಯಾಪಿಟಲ್ಸ್ ತಂಡ ೭ ವಿಕೆಟ್‌ಗಳಿಂದ ಜಯ ಗಳಿಸಿದೆ. ಮೊದಲು ಬ್ಯಾಟಿಂಗ್ ಮಾಡಿದ ರಾಯಲ್ ಚಾಲೆಂಜರ್ಸ್ ಬೆಂಗಳೂರು, ನಿಗದಿತ ೨೦ ಓವರ್‌ಗಳಲ್ಲಿ ೮ ವಿಕೆಟ್ ನಷ್ಟಕ್ಕೆ ೧೭೫ ರನ್ ಗಳಿಸಿತು. ಗೆಲುವಿನ ಗುರಿ ಬೆನ್ನತ್ತಿದ ಡೆಲ್ಲಿ ಕ್ಯಾಪಿಟಲ್ಸ್ ೧೯.೫ ಓವರ್‌ಗಳಲ್ಲಿ ೪ ವಿಕೆಟ್ ನಷ್ಟಕ್ಕೆ ೧೭೯ ರನ್ ಗಳಿಸುವ ಮೂಲಕ ಗೆಲುವಿನ ನಗೆ ಬೀರಿತು.

ಹೈದರಾಬಾದ್‌ನ ರಾಜೀವ್ ಗಾಂಧಿ ಅಂತಾರಾಷ್ಟ್ರೀಯ ಕ್ರೀಡಾಂಗಣದಲ್ಲಿ ನಡೆಯುತ್ತಿರುವ ದಿನದ ಮತ್ತೊಂದು ಪಂದ್ಯದಲ್ಲಿ ಸನ್ ರೈಸರ್ಸ್ ಹೈದರಾಬಾದ್ ಮತ್ತು ಚೆನ್ನೈ ಸೂಪರ್ ಕಿಂಗ್ಸ್ ಮುಖಾಮುಖಿಯಾಗಿವೆ. ಟಾಸ್ ಗೆದ್ದ ಚೆನ್ನೈ ಸೂಪರ್ ಕಿಂಗ್ಸ್ , ಫೀಲ್ಡಿಂಗ್ ಆಯ್ಕೆ ಮಾಡಿಕೊಂಡಿದೆ.

**<>><>< ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು ><><<>**